# Akashvani : Bangalore

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**30.03.2024 / 18.40 hrs**

<u>ಮುಖ್ಯಾಂಶಗಳು</u>

೧. ರಾಜಕೀಯಪಕ್ಷಗಳು ಮತ್ತು ಅಭ್ಯರ್ಥಿಗಳು, ಲೋಕಸಭಾ ಚುನಾವಣಾ ಖರ್ಚು-ವೆಚ್ಚದ ಸೂಕ್ತ ದಾಖಲೆ ನೀಡಿಕೆ ಕಡ್ಡಾಯ - ಅಭ್ಯರ್ಥಿಗಳ ಬ್ಯಾಂಕ್ ವಹಿವಾಟುಗಳ ಮೇಲೆ ತೀವ್ರ ನಿಗಾ

೨. ಮತದಾರರ ಪಟ್ಟಿಗೆ ಹೆಸರು ಸೇರಿಸಲು ಏಪ್ರಿಲ್ ೯ ಕಡೆಯ ದಿನ - ಮತದಾರರ ಸಹಾಯವಾಣಿ ಆಪ್ ಬಳಸುವಂತೆ ಚುನಾವಣಾ ಆಯೋಗದ ಮನವಿ

೩. ಫಾಸ್ ಟ್ಯಾಗ್‌ಗೆ ಕೆ.ವೈ.ಸಿ ಅಪ್‌ಡೇಟಿಂಗ್ ಮತ್ತು ಪಾನ್- ಆಧಾರ್ ಜೋಡಣೆಗೆ ನಾಳೆ ಕಡೆದಿನ

೪. ಚಾಮರಾಜನಗರದ ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಬೆಂಕಿ ಆರಿಸಲು ಅರಣ್ಯ ಸಿಬ್ಬಂದಿ ಕಾರ್ಯ ನಿರತ

೫. ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿ ಆರಂಭ ; ಕೊಡಗಿನಲ್ಲಿ ಒಂದು ತಿಂಗಳು ಹಾಕಿ ಉತ್ಸವ

**<><*<><>*><>**

ಲೋಕಸಭಾ ಚುನಾವಣೆಗೆ ಚುನಾವಣಾ ಆಯೋಗ ಹಾಗೂ ರಾಜಕೀಯ ಪಕ್ಷಗಳ ಚಟುವಟಿಕೆ ಚುರುಕುಗೊಂಡಿದೆ. ಏಪ್ರಿಲ್ ೧೯ ರಂದು ಮತದಾನ ನಡೆಯಲಿರುವ ೧೭ ರಾಜ್ಯ ಹಾಗೂ ೪ ಕೇಂದ್ರಾಡಳಿತ ಪ್ರದೇಶಗಳಲ್ಲಿ ನಾಮಪತ್ರ ಹಿಂಪಡೆಯಲು ಇಂದು ಕಡೆಯ ದಿನವಾಗಿತ್ತು. ಈ ಹಂತದಲ್ಲಿ ಒಟ್ಟು ೧೦೨ ಸಂಸದೀಯ ಮತಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ.

***

ಲೋಕಸಭಾ ಚುನಾವಣೆಗೆ ಬಿಜೆಪಿ ಇಂದು ಚುನಾವಣಾ ಪ್ರಣಾಳಿಕೆ ಸಮಿತಿಯನ್ನು ರಚಿಸಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಧ್ಯಕ್ಷತೆಯಲ್ಲಿ ೨೭ ಸದಸ್ಯರು ಸಮಿತಿಯಲ್ಲಿದ್ದಾರೆ. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಸಮಿತಿಯ ಸಂಯೋಜಕರನ್ನಾಗಿ ಹಾಗೂ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಸಚಿವ ಪಿಯೂಷ್ ಗೋಯಲ್ ಅವರನ್ನು, ಸಹಸಂಯೋಜಕರನ್ನಾಗಿ ನಿಯೋಜಿಸಲಾಗಿದೆ. ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಈ ಕುರಿತು ಪ್ರಕಟಣೆ ಹೊರಡಿಸಿದ್ದಾರೆ. ಕರ್ನಾಟಕದಿಂದ ರಾಜೀವ್ ಚಂದ್ರಶೇಖರ್ ಸೇರಿದಂತೆ ಹಲವು ರಾಜ್ಯಗಳನ್ನು ಪ್ರತಿನಿಧಿಸುವ ಪ್ರಮುಖರು ಸಮಿತಿಯ ಸದಸ್ಯರಾಗಿದ್ದಾರೆ. ತನ್ನ ಲೋಕಸಭಾ ಚುನಾವಣೆ ಪ್ರಣಾಳಿಕೆಯನ್ನು ಬಿಜೆಪಿ ಸಂಕಲ್ಪ ಪತ್ರ ಎಂದು ಕರೆಯಲಿದೆ. ಸದದಲ್ಲೇ ಸಮಿತಿ ಸಭೆ ಸೇರಿ ಪ್ರಣಾಳಿಕೆಯ ಅಂಶಗಳ ಬಗ್ಗೆ ಸಮಾಲೋಚಿಸಲಿದ್ದು, ಇನ್ನೊಂದು ವಾರದಲ್ಲಿ ಬಿಜೆಪಿ ಸಂಕಲ್ಪಪತ್ರ ಬಿಡುಗಡೆಯಾಗುವ ನಿರೀಕ್ಷೆಯಿದೆ. ಈ ನಡುವೆ, ರಾಜ್ಯದ ಬಹು ಚರ್ಚಿತ ಕೋಲಾರ ಪರಿಶಿಷ್ಟ ಜಾತಿ ಸಂಸದೀಯ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಹೆಸರು ಘೋಷಣೆಯಾಗಿದೆ. ಬೆಂಗಳೂರು ಕೇಂದ್ರ ವಲಯ ಕಾಂಗ್ರೆಸ್ ಅಧ್ಯಕ್ಷ ಕೆ.ವಿ. ಗೌತಮ್ ಅವರಿಗೆ ಪಕ್ಷದ ಟಿಕೆಟ್ ನೀಡಲಾಗಿದೆ. ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಪ್ರಕಟಣೆಯಲ್ಲಿ ಈ ವಿಷಯ ತಿಳಿಸಿದ್ದಾರೆ. ಕಾಂಗ್ರೆಸ್ ಹಿರಿಯ ನಾಯಕ ಕೆ.ಎಚ್. ಮುನಿಯಪ್ಪ, ಈ ಮತಕ್ಷೇತ್ರದಿಂದ ಸ್ಪರ್ಧಿಸಲು ತಮ್ಮ ಅಳಿಯನಿಗೆ ಟಿಕೆಟ್ ನೀಡಬೇಕೆಂದು ಬೇಡಿಕೆ ಇಟ್ಟಿದ್ದರು. ಇದಕ್ಕೆ ರಾಜ್ಯ ಕಾಂಗ್ರೆಸ್ ವಲಯದಲ್ಲಿ ವಿರೋಧ ವ್ಯಕ್ತವಾಗಿತ್ತು.

***

ರಾಜ್ಯದೆಲ್ಲೆಡೆ ವೆಚ್ಚವೀಕ್ಷಕರು, ಫ್ಲೈಯಿಂಗ್‌ಸ್ಕ್ವಾಡ್‌ಗಳು, ವಿಡಿಯೋ ಸರ್ವೆಲೆನ್ಸ್, ವಿಡಿಯೋ ವೀವಿಂಗ್ ತಂಡಗಳು, ಸ್ಟಾಟಿಕ್ ಸರ್ವೆಲೆನ್ಸ್ ತಂಡಗಳು ಕಟ್ಟೆಚ್ಚರ ವಹಿಸಿವೆ. ಲೋಕಸಭಾ ಮತಕ್ಷೇತ್ರಗಳಲ್ಲಿ ರಾಜಕೀಯ ಅಭ್ಯರ್ಥಿಗಳ ಚುನಾವಣಾ ಖರ್ಚು ವೆಚ್ಚದ ಮೇಲೆ ನಿಗಾ ವ್ಯವಸ್ಥೆಯನ್ನು ಇನ್ನಷ್ಟು ಕಟ್ಟುನಿಟ್ಟುಗೊಳಿಸಲಾಗಿದೆ. ಅಭ್ಯರ್ಥಿಗಳಿಗೆ ನಿಗದಿಯಾಗಿರುವ ಚುನಾವಣಾ ವೆಚ್ಚದ ಬಗ್ಗೆ ಸೂಕ್ತ ಲೆಕ್ಕಪತ್ರಗಳ ದಾಖಲೆ ಕಡ್ಡಾಯ ಎಂದು ವಿವರಿಸಲಾಗುತ್ತಿದೆ. ಅನಧಿಕೃತ ಮದ್ಯ ಸಾಗಾಟ, ಬ್ಯಾಂಕ್‌ಗಳಲ್ಲಿ ನಡೆಯುವ ಸಂಶಯಾಸ್ಪದ ವಹಿವಾಟುಗಳ ಮೇಲೂ ಚುನಾವಣಾಧಿಕಾರಿಗಳು ಕಣ್ಣಿಟ್ಟಿದ್ದಾರೆ. ಚುನಾವಣಾ ಚೆಕ್‌ಪೋಸ್ಟ್‌ಗಳಲ್ಲಿ ಅಕ್ರಮ ನಗದು ಹಣ, ಮತದಾರರನ್ನು ಆಕರ್ಷಿಸಲು ರಾಜಕೀಯ ಪಕ್ಷಗಳು ನೀಡುವ ಉಡುಗೊರೆಗಳು, ಚಿನ್ನ, ಬೆಳ್ಳಿ, ಮದ್ಯ, ಸಾರಾಯಿ, ಸಾಗಾಟ ಮಾಡುವ ವಾಹನಗಳ ತಪಾಸಣೆಯನ್ನು ತೀವ್ರಗೊಳಿಸಲಾಗಿದೆ.

ಬಾಗಲಕೋಟೆ ಜಿಲ್ಲೆ ಹುನಗುಂದ ಲೋಕಸಭಾ ಮತಕ್ಷೇತ್ರ ವ್ಯಾಪ್ತಿಯ ಗುಗ್ಗಲಮರಿ, ಧನ್ನೂರ, ಚೆಕ್‌ಪೋಸ್ಟ್‌ಗಳಲ್ಲಿ ಫ್ಲೈಯಿಂಗ್ ಸ್ಕ್ವಾಡ್ ತಂಡದ ಅಧಿಕಾರಿಗಳು ದಾಖಲೆಯಿಲ್ಲದ ೩೫ ಲಕ್ಷ ೪೮ ಸಾವಿರ ರೂಪಾಯಿ ನಗದು ಹಣವನ್ನು ವಶಪಡಿಸಿಕೊಂಡಿದ್ದು, ಖಜಾನೆಗೆ ಜಮೆ ಮಾಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಜಾನಕಿ ಕೆ.ಎಂ. ತಿಳಿಸಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯಲ್ಲಿ ಇಂದು ಜನಹಿತ ಪಕ್ಷದ ಕುಮಾರ್‌ಪೂಜಾರಿ ಹಾಗೂ ಪಕ್ಷೇತರ ಅಭ್ಯರ್ಥಿ ಸುಧೀರ್ ಕಾಂಚನ್, ಉಡುಪಿ-ಚಿಕ್ಕಮಗಳೂರು ಸಂಸದೀಯ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದರು.

ವಿಜಯಪುರ ಲೋಕಸಭಾ ಕ್ಷೇತ್ರದಲ್ಲಿ ಚುನಾವಣೆಯನ್ನು ಪಾರದರ್ಶಕ ಮತ್ತು ನ್ಯಾಯಸಮ್ಮತವಾಗಿ ನಡೆಸಲು ಚುನಾವಣೆ ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ಅಧಿಕಾರಿಗಳು ಮತ್ತು ಸಿಬ್ಬಂದಿ ತಮ್ಮ ಜವಾಬ್ದಾರಿಗಳನ್ನು ಕಟ್ಟೆಚ್ಚರದಿಂದ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ಭೂ ಬಾಲನ್ ಸೂಚಿಸಿದ್ದಾರೆ. ಮತಗಟ್ಟೆ ಅಧಿಕಾರಿಗಳಿಗೆ ಮೊದಲ ಹಂತದ ತರಬೇತಿ ಅಂಚೆ ಮತಪತ್ರಗಳ ನಿರ್ವಹಣೆ, ಚುನಾವಣಾ ತಂಡಗಳಿಗೆ ವಾಹನ ಹಂಚಿಕೆ ಮೊದಲಾದ ವಿಷಯಗಳ ಬಗ್ಗೆ ಇಂದು ಚರ್ಚಿಸಲಾಯಿತು.

ದಕ್ಷಿಣಕನ್ನಡ ಲೋಕಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ರಾಜಕೀಯ ಪಕ್ಷಗಳ ಹಾಗೂ ಅಭ್ಯರ್ಥಿಗಳ ಚುನಾವಣಾ ಖರ್ಚು-ವೆಚ್ಚಗಳ ಮೇಲೆ ನಿಗಾ ಇಡಲು ಲೆಕ್ಕ ವೀಕ್ಷಕರನ್ನು ನಿಯೋಜಿಸಲಾಗಿದೆ. ಈ ಅಧಿಕಾರಿ ಈಗಾಗಲೇ ಜಿಲ್ಲೆಯಲ್ಲಿ ಮೊಕ್ಕಾಂ ಹೂಡಿದ್ದು, ಸಾರ್ವಜನಿಕರು ತಮ್ಮ ಅಹವಾಲು, ದೂರುಗಳನ್ನು ಸಲ್ಲಿಸಲು ಅವಕಾಶವಿದೆ ಎಂದು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹಲವೆಡೆ ಲೋಕಸಭಾ ಚುನಾವಣೆ ಮತದಾರರ ಜಾಗೃತಿ ಕಾರ್ಯಕ್ರಮಗಳು ನಡೆಯುತ್ತಿವೆ. ದೊಡ್ಡಬಳ್ಳಾಪುರ ತಾಲೂಕು ದರ್ಗಾಜೋಗಹಳ್ಳಿಯಲ್ಲಿ ಇಂದು ರಂಗೋಲಿ ಸ್ಪರ್ಧೆ ಮೂಲಕ ಮತದಾನ ಜಾಗೃತಿ ಮೂಡಿಸಲಾಯಿತು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣಾ ಸಂಬಂಧದ ದೂರುಗಳನ್ನು ದಾಖಲಿಸಲು ೯೯೦೨೭-೦೨೬೭೩ ಈ ಮೊಬೈಲ್ ಸಂಖ್ಯೆಯನ್ನು ಸಂಪರ್ಕಿಸಬಹುದು. ಈ ಮತಕ್ಷೇತ್ರದ ವೆಚ್ಚವೀಕ್ಷಕರನ್ನು ನೇರ ಭೇಟಿಯಾಗಿ ಕೂಡ ದೂರು ಸಲ್ಲಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಹಾವೇರಿ ಜಿಲ್ಲೆಯಲ್ಲಿ ಮತದಾರರ ಅಂತಿಮ ಪಟ್ಟಿಗೆ ನೋಂದಣಿ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಜಿಲ್ಲಾಧಿಕಾರಿ ಕಾರ್ಯಾಲಯದಲ್ಲಿ ನಿಗದಿತ ಅರ್ಜಿಗಳನ್ನು ಪಡೆಯಬಹುದು. ಏಪ್ರಿಲ್ ೯ ರೊಳಗೆ ಹೆಸರು ನೋಂದಾಯಿಸಿಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ರಘುನಂದನ್ ಮೂರ್ತಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಧಾರವಾಡ ಜಿಲ್ಲೆಯ ಕಲಘಟಗಿ ತಾಲೂಕು ಪಂಚಾಯಿತಿ ವತಿಯಿಂದ ಇಂದು ಮತದಾರರ ಜಾಗೃತಿ ವಾಕಥಾನ್ ಆಯೋಜಿಸಲಾಗಿತ್ತು. ದೇಶದ ಪ್ರತಿಯೊಬ್ಬ ಪ್ರಜೆಯ ಮತವೂ ಸಹ ಅತ್ಯಂತ ಅಮೂಲ್ಯವಾಗಿದ್ದು, ಆಮಿಷಗಳಿಗೆ ಒಳಗಾಗದೇ ಪ್ರತಿಯೊಬ್ಬರೂ ತಮ್ಮ ಅಮೂಲ್ಯ ಹಕ್ಕನ್ನು ಚಲಾಯಿಸಬೇಕು ಎಂದು ಹುಬ್ಬಳ್ಳಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಡಾ. ರಾಮಚಂದ್ರ ಹೊಸಮನಿ ಮನವಿ ಮಾಡಿದ್ದಾರೆ.

ಉಡುಪಿ-ಚಿಕ್ಕಮಗಳೂರು ಲೋಕಸಭಾ ಮತಕ್ಷೇತ್ರಕ್ಕೆ ಕ್ಷೇತ್ರ ವ್ಯಾಪ್ತಿಯ ದೂರುಗಳಿದ್ದಲ್ಲಿ ವೆಚ್ಚ ವೀಕ್ಷಕರನ್ನು ಸಂಪರ್ಕಿಸಬೇಕು ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ಹೊರಡಿಸಿದೆ.

ಚಾಮರಾಜನಗರ ಜಿಲ್ಲಾ ವ್ಯಾಪ್ತಿಯ ಮದ್ದೂರು, ಬಂಡೀಪುರ ಚೆಕ್‌ಪೋಸ್ಟ್‌ಗಳಲ್ಲಿ ದಾಖಲೆ ಇಲ್ಲದೇ ಒಯ್ಯುತ್ತಿದ್ದ ೪ ಲಕ್ಷ ೯೮ ಸಾವಿರದ ೫೦೦ ರೂಪಾಯಿ ನಗದು ಹಣವನ್ನು ಎಸ್‌ಎಫ್‌ಟಿ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾನಾಗ್ ಮಾಹಿತಿ ನೀಡಿದ್ದರೆ.

ಕಲಬುರಗಿ ಸಂಸದೀಯ ಮತಕ್ಷೇತ್ರದಲ್ಲಿ ಮತದಾನದ ದಿನದಂದು ಎದುರಾಗುವ ಸಮಸ್ಯೆಗಳ ತುರ್ತು ನಿರ್ವಹಣೆ ಬಗ್ಗೆ ಸೆಕ್ಟರ್ ಅಧಿಕಾರಿಗಳು ಮತ್ತು ಮಾಸ್ಟರ್ ಟ್ರೇನರ್‌ಗಳಿಗೆ ಒಂದು ದಿನದ ತರಬೇತಿ ಕಾರ್ಯಾಗಾರ ಇಂದು ನಡೆಯಿತು. ತಮ್ಮ ಜವಾಬ್ದಾರಿಗಳನ್ನು ಅರಿತು ಅಧಿಕಾರಿಗಳು ಕಾರ್ಯ ನಿರ್ವಹಿಸಬೇಕು. ವಿದ್ಯುನ್ಮಾನ ಮತಯಂತ್ರಗಳಲ್ಲಿ ದೋಷ ಕಂಡುಬಂದಲ್ಲಿ ತಕ್ಷಣ ಬದಲಾಯಿಸುವಂತಹ ಕ್ಲಿಷ್ಟಕರ ಸವಾಲುಗಳ ಸೂಕ್ತ ನಿರ್ವಹಣೆ ಅಪೇಕ್ಷಣೀಯ ಎಂದು ಜಿಲ್ಲಾ ಚುನಾವಣಾಧಿಕಾರಿ ಬಿ. ಫೌಜಿಯಾ ತರನ್ನುಮ್ ಸೂಚಿಸಿದರು.

ಬೆಂಗಳೂರು ಗ್ರಾಮಾಂತರ ಕ್ಷೇತ್ರ ವ್ಯಾಪ್ತಿಯ ಸಂಸದೀಯ ಮತಕ್ಷೇತ್ರದ ಚೆನ್ನಪಟ್ಟಣ ತಾಲೂಕು ಅಳೆಹಳ್ಳಿ ಗ್ರಾಮದಲ್ಲಿ ಇಂದು ಮನ್ರೇಗಾ ಕೂಲಿ ಕಾರ್ಮಿಕರಿಗೆ ಮತದಾನ ಜಾಗೃತಿ ಕಾರ್ಯಕ್ರಮ ನಡೆಯಿತು. ಮತದಾನದ ಮಹತ್ವದ ಬಗ್ಗೆ ವಿವರಿಸಲಾಯಿತು.

ಧಾರವಾಡ ಲೋಕಸಭಾ ಮತಕ್ಷೇತ್ರ ವ್ಯಾಪ್ತಿಯ ಎಲ್ಲ ಕಲ್ಯಾಣ ಮಂಟಪಗಳು, ಸಮುದಾಯ ಭವನಗಳು ತಮ್ಮಲ್ಲಿ ನಿಗದಿಯಾಗಿರುವ ಮದುವೆ, ಹುಟ್ಟುಹಬ್ಬ ಮತ್ತಿತರ ಸಮಾರಂಭಗಳ ದಿನಾಂಕಗಳನ್ನು ಆಯಾ ತಾಲೂಕು ತಹಶೀಲ್ದಾರ್‌ರಿಗೆ ಕಡ್ಡಾಯವಾಗಿ ತಿಳಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ದಿವ್ಯಾಪ್ರಭು ಸೂಚಿಸಿದ್ದಾರೆ. ಮದುವೆ ಮತ್ತಿತರ ಕಾರ್ಯಕ್ರಮಗಳು ರಾಜಕೀಯ ಚುನಾವಣಾ ಪ್ರಚಾರಕ್ಕೆ ದುರುಪಯೋಗವಾಗಬಾರದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಮೈಸೂರು-ಕೊಡಗು ಸಂಸದೀಯ ಮತಕ್ಷೇತ್ರದಲ್ಲಿ ಇಂದು ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳ ಚುನಾವಣಾ ಖರ್ಚು-ವೆಚ್ಚಗಳ ನಿಗಾ ವ್ಯವಸ್ಥೆಯನ್ನು ಪರಿಶೀಲಿಸಲಾಯಿತು. ರಾಜಕೀಯ ಪಕ್ಷಗಳಿಗೆ ಪ್ರಚಾರಕ್ಕಾಗಿ ಅನುಮತಿ ನೀಡಲು ತೆರೆದಿರುವ ಏಕಗವಾಕ್ಷಿ ಕೇಂದ್ರದ ವ್ಯವಸ್ಥೆಗಳನ್ನು ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ವಿವರಿಸಿದರು.

ಲೋಕಸಭಾ ಚುನಾವಣೆಗೆ ವಿಜಯನಗರ ಜಿಲ್ಲೆಯಲ್ಲಿ ಇಂದು ಅಂಚೆ ಮತಪತ್ರ ವಿತರಣೆ ಹಾಗೂ ಅಂಚೆ ಮತ ನೀಡಿಕೆ ಪ್ರಕ್ರಿಯೆಯನ್ನು ವಿವರಿಸಲಾಯಿತು. ಅಗತ್ಯ ಸೇವೆಗಳ ಇಲಾಖೆಗಳಲ್ಲಿ ಪಾಳಿ ನಿರ್ವಹಿಸುವ ಸಿಬ್ಬಂದಿ ಮತದಾನದಂದು ಅಂಚೆ ಮೂಲಕ ಮತ ಚಲಾಯಿಸಬಹುದು ಎಂದು ಜಿಲ್ಲಾಧಿಕಾರಿ ಎಂ.ಎಸ್. ದಿವಾಕರ್ ಮಾಹಿತಿ ನೀಡಿದರು.

ಬಳ್ಳಾರಿ ಲೋಕಸಭಾ ಮತಕ್ಷೇತ್ರ ವ್ಯಾಪ್ತಿಯ ಕಂಪ್ಲಿ ತಾಲೂಕಿನಲ್ಲಿ ಕಡಿಮೆ ಮತದಾನವಾದ ಸ್ಥಳಗಳನ್ನು ಗುರುತಿಸಿ ಮತದಾನದ ಬಗ್ಗೆ ಜಾಗೃತಿ ಮೂಡಿಸಲಾಯಿತು. ಅಕ್ರಮವಾಗಿ ಸಾಗಿಸುತ್ತಿದ್ದ ೮ ಲಕ್ಷ ೨೩ ಸಾವಿರ ರೂಪಾಯಿ ನಗದು ಹಣವನ್ನು ಕೋಟೆ ಚೆಕ್‌ಪೋಸ್ಟ್ ಬಳಿ ವಶಪಡಿಸಿಕೊಳ್ಳಲಾಯಿತು. ೫ ಲಕ್ಷ ೨೫ ಸಾವಿರ ರೂಪಾಯಿ ಮೌಲ್ಯದ ಮಿಕ್ಸರ್ ಗ್ರೈಂಡರ್‌ಗಳು ಮತ್ತು ೧ ಲಾರಿಯನ್ನು ಜಪ್ತಿ ಮಾಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತ್ ಕುಮಾರ್ ಮಾಹಿತಿ ನೀಡಿದ್ದಾರೆ.

೨೦೨೪ ರ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ವಿಜಯಪುರ ಜಿಲ್ಲೆಯಲ್ಲಿ ಪೊಲೀಸ್ ಇಲಾಖೆಯಿಂದ ಕೈಗೊಂಡ ಪೂರ್ವ ತಯಾರಿ ಕುರಿತಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಶ್ ಸೋನಾವನೆ ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ.
ವಿಜಯಪುರ ಜಿಲ್ಲೆ ಮಹಾರಾಷ್ಟ್ರಕ್ಕೆ ಹೊಂದಿಕೊಂಡಿರುವುದರಿಂದ ೧೧ ಚೆಕ್ ಪೋಸ್ಟ್‌ಗಳನ್ನು ಗಡಿ ಭಾಗದಲ್ಲಿಯೇ ಸ್ಥಾಪಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು ೨೯ ಚೆಕ್ ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ
ಧ್ವನಿ : ಋಷಿಕೇಶ್ ಸೋನಾವನೆ

<><*<><>*><>

೧೮ನೇ ಲೋಕಸಭೆಗೆ ಸದಸ್ಯರನ್ನು ಆಯ್ಕೆ ಮಾಡಲು ನಡೆಯಲಿರುವ ಸಾರ್ವತ್ರಿಕ ಚುನಾವಣೆಗೆ ಭಾರತ ಚುನಾವಣಾ ಆಯೋಗ, ಸಕಲ ಸಿದ್ಧತೆಯೊಂದಿಗೆ ಸಜ್ಜಾಗಿದೆ. ದೇಶದಲ್ಲಿ ಚುನಾವಣೆಗಳನ್ನು ಪಾರದರ್ಶಕವಾಗಿ ಹಾಗೂ ಅತ್ಯಂತ ವಿಶ್ವಾಸಾರ್ಹ ರೀತಿಯಲ್ಲಿ ನಡೆಸುವ ಸಂಕಲ್ಪದೊಂದಿಗೆ ಚುನಾವಣಾ ಆಯೋಗ, ಸಮಸ್ತ ಚುನಾವಣಾ ಪ್ರಕ್ರಿಯೆಗಳನ್ನು ಸುಗಮಗೊಳಿಸಲು ತಂತ್ರಜ್ಞಾನದ ನೆರವನ್ನು ಬಳಸಿಕೊಳ್ಳುತ್ತಿದೆ. ಈ ನಿಟ್ಟಿನಲ್ಲಿ ಮತದಾರರು, ಚುನಾವಣಾ ಸಿಬ್ಬಂದಿ ಹಾಗೂ ಆಯೋಗಕ್ಕೆ ನೆರವಾಗುವ ಹಲವು ಆಪ್‌ಗಳನ್ನು ಚುನಾವಣಾ ಆಯೋಗ ಅಭಿವೃದ್ಧಿಪಡಿಸಿದೆ.
ಈ ಪೈಕಿ ಇಂದು ವೋಟರ್ ಹೆಲ್ಪ್ ಲೈನ್ ಆಪ್ ಅಥವಾ ಮತದಾರರ ಸಹಾಯವಾಣಿ ಆಪ್ ಬಗ್ಗೆ ಒಂದಷ್ಟು ಮಾಹಿತಿ.

**************

ಮತದಾರರ ಅನುಕೂಲಕ್ಕಾಗಿ ಕಲ್ಪಿಸಲಾಗಿರುವ ಹಲವು ಸೇವೆಗಳ ಪೈಕಿ ಮತದಾರರ ಸಹಾಯವಾಣಿ ಆಪ್ ಕ್ರಾಂತಿಕಾರಕ ವಿಧಾನವಾಗಿದೆ. ಪ್ರಸ್ತುತ ದೇಶದಲ್ಲಿ ಮತದಾನದ ಹಕ್ಕನ್ನು ೧೮ ವರ್ಷ ತುಂಬಿದ ವ್ಯಕ್ತಿಗಳಿಗೆ ನೀಡಲಾಗುತ್ತಿದೆ. ಮೊದಲ ಬಾರಿಗೆ ಮತದಾನ ಮಾಡುವ ನವಮತದಾರರಿಗೆ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೊಂದಾಯಿಸುವುದು, ಮತದಾರರ ಪಟ್ಟಿಯಲ್ಲಿ ಈಗಾಗಲೇ ಹೆಸರು ಇರುವವರು ಕಾಲಕಾಲಕ್ಕೆ ಅಗತ್ಯವಿರುವಂತೆ ಕೆಲವು ವಿವರಗಳನ್ನು ಬದಲಾಯಿಸುವುದು, ಮತದಾರರ ಪಟ್ಟಿಯಲ್ಲಿ ನಮ್ಮ ಹೆಸರನ್ನು ಹುಡುಕುವುದು ಹಾಗೂ ಲಭ್ಯವಿರುವ ಇತರ ಚುನವಾಣಾ ಸಂಬಂಧೀ ಸೇವೆಗಳ ಬಗ್ಗೆ ಮಾಹಿತಿ ಪಡೆಯುವುದಕ್ಕೆ ಮತದಾರರ ಸಹಾಯವಾಣಿ ಆಪ್ ನೆರವಾಗಲಿದೆ.

<><*<><>*><>

ನಾಳೆ ಮಾರ್ಚ್ ೩೧. ಪ್ರಸಕ್ತ ಆರ್ಥಿಕ ವರ್ಷ ನಾಳೆ ಮುಕ್ತಾಯವಾಗುತ್ತಿರುವ ಹಿನ್ನೆಲೆಯಲ್ಲಿ ಭಾನುವಾರವಾದರೂ ಎಲ್ಲ ಬ್ಯಾಂಕ್ ಶಾಖೆಗಳು ಮತ್ತು ಜೀವವಿಮಾ ನಿಗಮ-ಎಲ್‌ಐಸಿ ಕಚೇರಿಗಳು ಸರ್ಕಾರೀ ವಹಿವಾಟು ನಡೆಸಲಿವೆ. ವಹಿವಾಟು ನಡೆಸಲು ಮಾರ್ಚ್೩೧ ರಂದು ಬ್ಯಾಂಕ್‌ಗಳು ಕರ್ತವ್ಯ ನಿರ್ವಹಿಸಬೇಕೆಂಬ ಸರ್ಕಾರದ ಮನವಿ ಮೇರೆಗೆ ಆರ್‌ಬಿಐ ಈ ಸೂಚನೆ ನೀಡಿತ್ತು.

<><*<><>*><>

ನಾಡಿದ್ದು ಏಪ್ರಿಲ್ ೧ ರಿಂದ ನೂತನ ಆರ್ಥಿಕ ವರ್ಷ ಆರಂಭವಾಗಲಿದೆ. ವಹಿವಾಟು ಕ್ಷೇತ್ರದಲ್ಲಿ ನೂತನ ಪ್ರಕ್ರಿಯೆಗಳು ಕಾರ್ಯಾರಂಭ ಮಾಡಲಿವೆ. ಇದಲ್ಲದೇ ಅನೇಕ ನಿಯಮಗಳಲ್ಲಿ ಮಹತ್ವದ ಬದಲಾವಣೆಯಾಗಲಿವೆ. ಫಾಸ್ಟ್‌ಟ್ಯಾಗ್ ಕೆವೈಸಿ ಅಪ್‌ಡೇಟಿಂಗ್, ಪ್ಯಾನ್-ಆಧಾರ್ ಜೋಡಣೆಗೆ ನೀಡಲಾಗಿದ್ದ ಅವಕಾಶ ನಾಳೆಗೆ ಮುಕ್ತಾಯವಾಗುವುದು. ಭಾರತದ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಫಾಸ್ಟ್‌ಟ್ಯಾಗ್ ಬಳಕೆಗೆ ಕೆವೈಸಿಯನ್ನು ಕಡ್ಡಾಯಗೊಳಿಸಿದೆ. ಏಪ್ರಿಲ್ ೧ ರಿಂದ ಹೆದ್ದಾರಿಗಳಲ್ಲಿ ಬಳಕೆಯಾಗುವ ಫಾಸ್ಟ್‌ಟ್ಯಾಗ್‌ಗಳ ವೈಯಕ್ತಿಕ ಮಾಹಿತಿ ಅಂದರೆ ಕೆವೈಸಿಯನ್ನು ಕಡ್ಡಾಯವಾಗಿ ಅಪ್‌ಡೇಟ್ ಮಾಡಬೇಕಾಗುತ್ತದೆ. ಒಂದು ವೇಳೆ ಈ ನಿಯಮ ಪಾಲನೆಯಾಗದಿದ್ದಲ್ಲಿ ಏಪ್ರಿಲ್ ೧ ರಿಂದ ವಾಹನ ಸವಾರರು ಹೆದ್ದಾರಿಗಳಲ್ಲಿ ಪರದಾಡಬೇಕಾಗುತ್ತದೆ. ಕೆವೈಸಿ ಅಪ್‌ಡೇಟ್ ಆಗಿಲ್ಲದ ಫಾಸ್ಟ್‌ಟ್ಯಾಗ್‌ಗಳನ್ನು ಬ್ಯಾಂಕ್‌ಗಳು ನಿಷ್ಕ್ರಿಯಗೊಳಿಸಲಿದ್ದು, ಫಾಸ್ಟ್‌ಟ್ಯಾಗ್‌ಗಳಲ್ಲಿ ಬ್ಯಾಲೆನ್ಸ್ ಮೊತ್ತ ಇದ್ದರೂ ಸಹ ಟೋಲ್‌ಗಳಲ್ಲಿ ಪರಿಗಣಿಸಲಾಗುವುದಿಲ್ಲ. ಪ್ಯಾನ್ ಮತ್ತು ಆಧಾರ್ ಜೋಡಣೆಗೆ ಅಂತಿಮ ಗಡುವು ಸಹ ನಾಳೆ ಮುಕ್ತಾಯವಾಗುವುದು. ಪ್ಯಾನ್-ಆಧಾರ್ ಜೋಡಣೆ ಮಾಡಿಲ್ಲದಿದ್ದಲ್ಲಿ, ಏಪ್ರಿಲ್ ೧ರ ನಂತರ ಇದಕ್ಕೆ ಒಂದು ಸಾವಿರ ರೂಪಾಯಿ ದಂಡ ಕಟ್ಟಬೇಕಾಗುತ್ತದೆ. ವಿಮಾ ಗ್ರಾಹಕರು ಎಷ್ಟು ತಡವಾಗಿ ಪಾಲಿಸಿ ಸರಂಡರ್ ಮಾಡುತ್ತಾರೋ, ಅದಕ್ಕೆ ಅನುಗುಣವಾಗಿ ಹೆಚ್ಚು ಸರಂಡರ್ ವ್ಯಾಲ್ಯೂ ದೊರೆಯಲಿದೆ. ನೌಕರರ ಭವಿಷ್ಯ ನಿಧಿ ನಿಯಮಗಳು ಬದಲಾಗಲಿವೆ. ಹೊಸ ನಿಯಮದಂತೆ ಉದ್ಯೋಗ ಬದಲಾದಾಗ ಭವಿಷ್ಯ ನಿಧಿ ಖಾತೆ ಸ್ವಯಂ ಚಾಲಿತ ವ್ಯವಸ್ಥೆಯ ಮೂಲಕ ವರ್ಗಾವಣೆಯಾಲಿದೆ. ಇದಕ್ಕಾಗಿ ಖಾತೆದಾರರ ಮನವಿ ಅರ್ಜಿ ಅಗತ್ಯವಿಲ್ಲ.

<><*<><>*><>

ಚಾಮರಾಜನಗರ ಜಿಲ್ಲೆಯ ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಇಂದು ಕಾಡಿಗೆ ಬೆಂಕಿ ಬಿದ್ದಿದ್ದು, ಇಲಾಖೆಯ ಸಿಬ್ಬಂದಿ ಬೆಂಕಿ ನಂದಿಸುವ ಕಾರ್ಯ ನಿರ್ವಹಿಸುತ್ತಿದ್ದಾರೆ. ಬೈಲೂರು ವಲಯ ವ್ಯಾಪ್ತಿಯ ಕೆ.ಕೆ. ಡ್ಯಾಂ ಸಮೀಪ ಗಸ್ತುಪಾಳಿಯಲ್ಲಿದ್ದ ಇಲಾಖೆಯ ಸಿಬ್ಬಂದಿ ಕಾಡಿನಿಂದ ಹೊಗೆ ಬರುತ್ತಿರುವುದನ್ನು ಗಮನಿಸಿ ಕೂಡಲೇ ಸ್ಥಳಕ್ಕೆ ತೆರಳಿ ಬೆಂಕಿ ನಂದಿಸಲು ಯತ್ನಿಸಿದ್ದಾರೆ. ಮತ್ತೊಂದೆಡೆ, ಜೋರು ಗಾಳಿ ಇದ್ದ ಕಾರಣ ಮತ್ತಷ್ಟು ಅರಣ್ಯ ಪ್ರದೇಶಕ್ಕೆ ಬೆಂಕಿ ವ್ಯಾಪಿಸಿದ್ದು, ೭೦ಕ್ಕೂ ಹೆಚ್ಚು ಸಿಬ್ಬಂದಿ ಈಗ ಕಾರ್ಯ ಪ್ರವೃತ್ತರಾಗಿದ್ದಾರೆ. ಕಿಡಿಗೇಡಿಗಳು ಕಾಡಿಗೆ ಬೆಂಕಿ ಹಚ್ಚಿದ್ದಾರೆ ಎಂದು ಹೇಳಲಾಗುತ್ತಿದೆ. ಪತ್ತೆ ಕಾರ್ಯಾಚರಣೆ ಪ್ರಾರಂಭವಾಗಿದೆ.

<><*<><>*><>

ಕೊಡವ ಸಮುದಾಯದಿಂದ ಹೆಚ್ಚಿನ ಸಂಖ್ಯೆಯಲ್ಲಿ ತೀರ್ಪುಗಾರರು ಹೊರಹೊಮ್ಮಲು ನಾಪೋಕ್ಲು ಗ್ರಾಮದಲ್ಲಿ ಹಾಕಿ ಉತ್ಸವದ ಸಂದರ್ಭದಲ್ಲೇ ಅಂಪೈರ್‌ಗಳಿಗಾಗಿ ತರಬೇತಿ ಶಿಬಿರವನ್ನು ಆಯೋಜಿಸಲಾಗುವುದು ಎಂದು ಓಲಂಪಿಯನ್ ಮತ್ತು ಹಾಕಿ ಕರ್ನಾಟಕದ ಕಾರ್ಯದರ್ಶಿ ಡಾ. ಎ.ಬಿ. ಸುಬ್ಬಯ್ಯ ತಿಳಿಸಿದ್ದಾರೆ. ನಾಪೋಕ್ಲು ಗ್ರಾಮದ ಜನರಲ್

ತಿಮ್ಮಯ್ಯ ಕ್ರೀಡಾಂಗಣದಲ್ಲಿ ಇಂದು ೨೪ನೇ ವರ್ಷದ ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿಯ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಇಂದಿನಿಂದ ಈ ಪಂದ್ಯಾವಳಿ ಒಂದು ತಿಂಗಳ ಕಾಲ ನಡೆಯಲಿದ್ದು, ೩೫೦ ಕೊಡವ ಕುಟುಂಬಗಳ ೩ ಸಾವಿರಕ್ಕೂ ಅಧಿಕ ಹಾಕಿ ಆಟಗಾರರು ಪಾಲ್ಗೊಳ್ಳುತ್ತಿದ್ದಾರೆ ಎಂದರು.

**<><*<><>*><>**

ಇನ್ನು, ಹವಾವರ್ತಮಾನ,

ರಾಜ್ಯದಲ್ಲಿ ಒಣಹವೆ ಮುಂದುವರೆದಿದೆ. ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ ಧಗೆ ವಿಪರೀತವಾಗಿದ್ದು, ಕಲಬುರಗಿಯಲ್ಲಿ ೪೧.೮ ಡಿಗ್ರಿ ಸೆಲ್ಸಿಯಸ್ ಗರಿಷ್ಠ ತಾಪಮಾನ ದಾಖಲಾಗಿದೆ. ಚಾಮರಾಜನಗರದಲ್ಲಿ ಕನಿಷ್ಠ ತಾಪಮಾನ ೧೮.೮ ಡಿಗ್ರಿ ಸೆಲ್ಸಿಯಸ್ ವರದಿಯಾಗಿದೆ. ಬೆಂಗಳೂರು ಮತ್ತು ಸುತ್ತಮುತ್ತ ನಿರ್ಮಲ ಆಕಾಶವಿದ್ದು, ಗರಿಷ್ಠ ೩೬, ಕನಿಷ್ಠ ೨೩ ಡಿಗ್ರಿ ಸೆಲ್ಸಿಯಸ್ ತಾಪಮಾನ ನಿರೀಕ್ಷಿತ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**